ಯೋಜನೆ ಸಿದ್ಧಪಡಿಸಿ ದಕ್ಷಿಣ ಕನ್ನಡ ಜಿಲ್ಲಾ ಪರಿಷತ್ ಮುಖಾಂತರ ಸರ್ಕಾರಕ್ಕೆ ಸಲ್ಲಿಸಲಾಗಿದ್ದು ಅದನ್ನು ಪರಿಶೀಲಿಸಲಾಗುತ್ತಿದೆ.

ಈ) ಹೌದು.

ಖಾಲಿ ಇರುವ ಪಿ.ಡಬ್ಲ್ಯೂಡಿ ಜಾಗದಲ್ಲಿ ಕಟ್ಟಲಾಗುವುದು.

ವಿಷಯ:-ದ.ಕನ್ನಡ ಜಿಲ್ಲೆಯಲ್ಲಿನ ಸರಕಾರಿ ಪ್ರೌಢಶಾಲೆಗಳಲ್ಲಿನ ಬೋಧಕೇತರ ಸಿಬ್ಬಂದಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1668 (2023)

ಶ್ರೀ ಕುಂಬ್ಳೆ ಸುಂದರರಾವ್ (ಸುರತ್ಕಲ್):- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ)ದಕ್ಷಿಣ ಕನ್ನಡ ಜಿಲ್ಲೆಯ ಸರ್ಕಾರಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಬೋಧಕೇತರ ಹುದ್ದೆಗಳು ಖಾಲಿ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ

ಆ)ಬೋಧಕೇತರ ಹುದ್ದೆಗಳು ಖಾಲಿ ಇರುವ ಸಂಸ್ಥೆಗಳೆಷ್ಟು (ಸಂಸ್ಥೆವಾರು ವಿವರ ಒದಗಿಸುವುದು)

ಇ)ಶಾಲೆಯ ಕನಿಷ್ಟ ಅವಶ್ಯಕತೆಯನ್ನು ಪೂರೈಸುವ ಸಲುವಾಗಿ ಎಷ್ಟು ಶಾಲೆಗಳಲ್ಲಿ ಬೋಧಕೇತರ ನೇಮಕಾತಿ ಮಾಡಲಾಗಿದೆ, ಯಾವ ಕಾರಣಕ್ಕಾಗಿ ಬೋಧಕೇತರ ನೇಮಕಾತಿಯನ್ನು ತಡೆ ಹಿಡಿಯಲಾಗಿದೆ.

ಈ) 1993-94, 1994-95ನೇ ಸಾಲಿಗೆ ಮಂಜೂರು ಮಾಡಲಾದ ಸರ್ಕಾರಿ ಪ್ರೌಢಶಾಲೆಗಳಿಗೆ ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಿದೆಯೇ? ಹಾಗಿದ್ದಲ್ಲಿ ಎಷ್ಟು ನೇಮಕಾತಿಯನ್ನು ಮಾಡಲಾಗಿದೆ? (ವಿವರ ಒದಗಿಸುವುದು)

ಉ)ಹೊಸ ಸರ್ಕಾರಿ ಪ್ರೌಢಶಾಲೆಗಳಿಗೆ ಬೋಧಕೇತರ ಹುದ್ದೆ ಮಂಜೂರು ಮಾಡುವಲ್ಲಿ ಸರ್ಕಾರಕ್ಕೆ ಆಗುವ ತೊಂದರೆ ಏನು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):-

ಅ) ಬಂದಿದೆ.

ಆ) ಸರ್ಕಾರಿ ಪ್ರೌಢಶಾಲೆಗಳು -35

ಸರ್ಕಾರಿ ಪದವಿ ಪೂರ್ವ ಕಾಲೇಜುಗಳು -43

ವಿವರವನ್ನು ನಂತರ ಒದಗಿಸಲಾಗುವುದು

ಇ) 1994-95ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ 20 ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದ್ದು, ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುವ ಕಾರಣ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಲ್ಲ.

ಈ) - ಇಲ್ಲ -

ಉ) ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುವ ಕಾರಣ ಮಂಜೂರು ಮಾಡಿಲ್ಲ.

ವಿಷಯ:- ಮಂಗಳೂರು ನಗರದಲ್ಲಿರುವ ಸಹಾಯಕ ಶಿಕ್ಷಣಾಧಿಕಾರಿಯ ಕಛೇರಿ.

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 1669 (2028)

ಶ್ರೀ ಕುಂಬ್ಳೆ ಸುಂದರರಾವ್ (ಸುರತ್ಕಲ್):- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರು ನಗರದಲ್ಲಿರುವ ಸಹಾಯಕ ಶಿಕ್ಷಣಾಧಿಕಾರಿ ಕಛೇರಿಯಲ್ಲಿರುವ ಸಹಾಯಕ ಶಿಕ್ಷಣಾಧಿಕಾರಿ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಸದರಿ ಹುದ್ದೆಯು ಎಷ್ಟು ಸಮಯದಿಂದ ಖಾಲಿ ಇದೆ. ಇದಕ್ಕೆ ಕಾರಣವೇನು.

ಇ) 1995-96ನೇ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಈ ಹುದ್ದೆಯನ್ನು ಸರ್ಕಾರ ಭರ್ತಿ ಮಾಡುವುದೇ;

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):-

ಅ) ಬಂದಿದೆ.

ಆ) ದಿನಾಂಕ 1-6-94 ರಿಂದ ಖಾಲಿ ಇದೆ. ಈ ಹುದ್ದೆಯು ಬಡ್ತಿಯಿಂದ ತೆರವಾಗಿರುವುದರಿಂದ ಖಾಲಿ ಇದೆ.

ಇ) ಭರ್ತಿ ಮಾಡಲಾಗುವುದು.

ವಿಷಯ:- ಬನ್ನೂರು ಟೌನ್‌ನಲ್ಲಿ ಸರ್ಕಾರಿ ಪದವಿ-ಪೂರ್ವ ಕಲಾವಿಜ್ಞಾನ ಕಾಲೇಜನ್ನು ಪ್ರಾರಂಭಿಸುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1670 (1833)

ಶ್ರೀ ಎಸ್.ಕೃಷ್ಣಪ್ಪ (ಬನ್ನೂರು):- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಬನ್ನೂರ ಟೌನ್ ಸರ್ಕಾರಿ ಪದವಿ ಪೂರ್ವ ವಿಜ್ಞಾನ ಕಾಲೇಜು ಇಲ್ಲದೇ ಇರುವುದು ನಿಜವಲ್ಲವೇ

ಆ) ಹಾಗಿದ್ದಲ್ಲಿ, 1996-97ನೇ ಸಾಲಿನಲ್ಲಿ ಬನ್ನೂರು ಟೌನ್‌ನಲ್ಲಿ ಸರ್ಕಾರಿ ಪದವಿ ಪೂರ್ವ ವಿಜ್ಞಾನ ಕಾಲೇಜನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):-

ಅ) -ಹೌದು-

ಆ) ಪರಿಶೀಲಿಸಲಾಗುವುದು

ವಿಷಯ:- ಅರಣ್ಯ ಇಲಾಖೆ ಬೆಳೆಸಿದ ಗಿಡಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1675 (1661)

ಶ್ರೀ ಡಿ.ಆರ್.ಪಾಟೀಲ್ (ಗದಗ್):- ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 5 ವರ್ಷಗಳಲ್ಲಿ ಅರಣ್ಯ ಇಲಾಖೆಯಿಂದ ಬೇರೆ ಬೇರೆ ಕಾರ್ಯಕ್ರಮದಡಿ ಬೆಳೆಸಿದ ಗಿಡಗಳ ಸಂಖ್ಯೆ ಎಷ್ಟು?